# Bangalore
# Regional News
# 05.03.2025 / 2.30 p.m.
## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಹಕ್ಕಿಜ್ವರದ ಬಗ್ಗೆ ಆತಂಕ ಪಡುವ ಅಗತ್ಯವಿಲ್ಲ – ಆರೋಗ್ಯ ಸಚಿವ ದಿನೇಶ್ ಗುಂಡೂರಾವ್
2. ಗಂಗಾ ಕಲ್ಯಾಣ ಯೋಜನೆಯಡಿ ಹೆಚ್ಚಿನ ಕೊಳವೆಬಾವಿಗೆ ವಿಧಾನಸಭೆಯಲ್ಲಿ ಪಕ್ಷಾತೀತ ಮನವಿ
3. ರೈತರು, ಗ್ರಾಹಕರಿಗೆ ಹೊರೆಯಾಗದಂತೆ ಹಾಲಿನ ದರ ಪರಿಷ್ಕರಣೆ – ಪಶುಸಂಗೋಪನೆ ಸಚಿವ ವೆಂಕಟೇಶ್
4. ಪರಿಶಿಷ್ಟರ ಹಣ ದುರ್ಬಳಕೆ ಆರೋಪ; ಬೆಂಗಳೂರಿನಲ್ಲಿ ಬಿಜೆಪಿ ನಾಯಕರಿಂದ ಪ್ರತಿಭಟನೆ

*****************

ಹಕ್ಕಿ ಜ್ವರದ ಪ್ರಕರಣಗಳು ರಾಜ್ಯದ ಅಲ್ಲಲ್ಲಿ ವರದಿಯಾಗುತ್ತಿದ್ದು, ಜನರು ಭಯಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಹಕ್ಕಿಜ್ವರ ಸಾಂಕ್ರಾಮಿಕ ರೋಗವಾದರೂ, ಅದು ಹಕ್ಕಿಗಳಿಂದ ಮನುಷ್ಯರಿಗೆ ಹರಡುವುದು ಅಪರೂಪ. ಹೀಗಾಗಿ ಅನಗತ್ಯ ಆತಂಕ ಪಡುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಆದರೂ ಮೊಟ್ಟೆ ಮತ್ತು ಮಾಂಸವನ್ನು ಸೇವಿಸುವಾಗ ಕೆಲ ಎಚ್ಚರಿಕೆಗಳನ್ನು ಪಾಲಿಸಬೇಕಾದ ಅಗತ್ಯವಿದೆ. ಮೊಟ್ಟೆ ಮತ್ತು ಮಾಂಸವನ್ನು 70 ಡಿಗ್ರಿ ಉಷ್ಣಾಂಶದಲ್ಲಿ ಅರ್ಧಗಂಟೆಗೂ ಹೆಚ್ಚು ಕಾಲ ಬೇಯಿಸಿ ಸೇವಿಸಬೇಕು ಎಂದು ಸಲಹೆ ನೀಡಿದ್ದಾರೆ.

ಸೋಂಕು ಪೀಡಿತ ಕೋಳಿ ಫಾರಂ, ಮೃತ ಹಕ್ಕಿ ಅಥವಾ ಕೋಳಿಗಳ ಸಮೀಪಕ್ಕೆ ಹೋಗದೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದ್ದಾರೆ.

*****************

ಗಂಗಾಕಲ್ಯಾಣ ಯೋಜನೆಯಡಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಕೊಳವೆ ಬಾವಿ ಮಂಜುರಾತಿ ಕೊರತೆಯಿಂದ ಕ್ಷೇತ್ರದ ಫಲಾನುಭವಿಗಳಿಗೆ ಅನ್ಯಾಯವಾಗಿದೆ ಎಂದು ಆಡಳಿತ ಮತ್ತು ಪ್ರತಿಪಕ್ಷ ಸದಸ್ಯರು ಪಕ್ಷ ಭೇದ ಮರೆತು ವಿಧಾನಸಭೆ ಅಧಿವೇಶನದಲ್ಲಿ ಪ್ರಸ್ತಾಪಿಸಿದರು. ಪ್ರಶ್ನೋತ್ತರ ಕಲಾಪದಲ್ಲಿ ಸಮಾಜಕಲ್ಯಾಣ ಸಚಿವ ಡಾ ಎಚ್.ಸಿ.ಮಹದೇವಪ್ಪ ಅವರನ್ನು ಪಕ್ಷಾತೀತವಾಗಿ ಒತ್ತಾಯಿಸಿದರು. ಇದೇ ವೇಳೆ, ಎಲ್ಲಾ ಸದಸ್ಯರು ಕೊಳವೆ ಬಾವಿಗಳ ಸಂಖ್ಯೆ ಹೆಚ್ಚಿಸಬೇಕು ಎಂದು ಮನವಿ ಮಾಡಿದರು.

ಬಿಜೆಪಿಯ ಡಾ ಚಂದ್ರು.ಕೆ. ಲಮಾಣಿ ಅವರ ಪ್ರಶ್ನೆಗೆ ಉತ್ತರಿಸಿದ ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹಾದೇವಪ್ಪ ಅವರು 2018 –19 ನೇ ಗಂಗಾಕಲ್ಯಾಣ ಯೋಜನೆಯಡಿ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದ್ದು ತಾಂಡಾ ಅಭಿವೃದ್ಧಿ ನಿಗಮದ ಗುರಿಯಲ್ಲಿ 1ಸಾವಿರದ 452 ಕೊಳವೆ ಬಾವಿಗಳನ್ನು ಕೊರೆದು ಹಣ ಪಾವತಿಸಲಾಗಿದೆ ಎಂದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಪ್ರತಿಪಕ್ಷ ನಾಯಕ ಆರ್.ಅಶೋಕ ಮಧ್ಯಪ್ರವೇಶಿಸಿ ಪ್ರತಿ ವಿಧಾನಸಭಾಕ್ಷೇತ್ರದಲ್ಲಿ 40ರಿಂದ 50 ಸಾವಿರ ಕುಟುಂಬಗಳಿದ್ದು ಈಗಾಗಲೆ ನಿಗದಿ ಪಡಿಸಿದ ಕೊಳವೆ ಬಾವಿಯಿಂದ ಬೇಡಿಕೆ ಈಡೇರಿಸಲು ಸಾಧ್ಯವಿಲ್ಲ. ಕೊಳವೆ ಬಾವಿಯ ಸಂಖ್ಯೆ ಹೆಚ್ಚಿಸಲು ಸಾಧ್ಯವಾಗದಿದ್ದರೆ ಕೊಳವೆಬಾವಿ ಕೊಡುವುದನ್ನು ನಿಲ್ಲಿಸಿ ಬಿಡಿ ಎಂದು ಒತ್ತಾಯಿಸಿದರು.

ಅಶೋಕ ಅವರನ್ನು ಬೆಂಬಲಿಸಿ ಮಾತನಾಡಿದ ಬಿಜೆಪಿಯ ಸುನೀಲ್ ಕುಮಾರ್ ಹಾಗೂ ಅರಗಜ್ಞಾನೇಂದ್ರ ಪ್ರತಿಕ್ಷೇತ್ರಕ್ಕೂ ಹೆಚ್ಚಿನ ಕೊಳವೆಬಾವಿ ಮಂಜೂರು ಮಾಡಬೇಕು ಎಂದು ಒತ್ತಾಯಿಸಿದರು. ಸದಸ್ಯರ ಮನವಿಯನ್ನು ಪರಿಗಣಿಸಿದ ಸಚಿವರು ಗಂಗಾಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಸಂಖ್ಯೆ ಹೆಚ್ಚಿಸಲು ಕ್ರಮಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

*****************

ಕಾಡುಗೊಲ್ಲ ಹಾಗೂ ಗೊಲ್ಲ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಪ್ರಸ್ತಾವನೆ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ್ ತಂಗಡಗಿ ವಿಧಾನಸಭೆಯಲ್ಲಿ ಇಂದು ಮಾಹಿತಿ ನೀಡಿದರು.

ಕಾಂಗ್ರೆಸ್‌ನ ಶಿವಲಿಂಗೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವ ಶಿವರಾಜ್ ತಂಗಡಗಿ 2018 ರಲ್ಲಿ ಗೊಲ್ಲ ಸಮುದಾಯ ಹಿಂದುಳಿದವರ್ಗಕ್ಕೆ ಸೇರಿತ್ತು. ಅದನ್ನು ಪರಿಶಿಷ್ಟ ವರ್ಗಕ್ಕೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ, ಕಾಡುಗೊಲ್ಲ ಅಭಿವೃದ್ಧಿ ನಿಗಮಕ್ಕೆ ಪ್ರತ್ಯೇಕ ಅನುದಾನ ನೀಡಲು ಸರ್ಕಾರ ಕ್ರಮಕೈಗೊಂಡಿದೆ ಎಂದರು.

*****************

ಗ್ರೇಟರ್ ಬೆಂಗಳೂರು ರಚನೆ ಸಂಬಂಧ ಶಾಸಕ ರಿಜ್ವಾನ್ ಅರ್ಷದ್ ನೇತೃತ್ವದ ಸದನ ಸಮಿತಿ ಸಿದ್ಧಪಡಿಸಿದ ವರದಿಯನ್ನು ವಿಧಾನಸಭೆಯಲ್ಲಿ ಇಂದು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ರಿಜ್ವಾನ್ ಅರ್ಷದ್, 2008 ರಲ್ಲಿ ಬಿಬಿಎಂಪಿ ಅಸ್ತಿತ್ವಕ್ಕೆ ಬಂದಿದ್ದು, ಆ ಸಮಯದಲ್ಲಿ ನಗರ ಜನಸಂಖ್ಯೆ 75 ಲಕ್ಷ ಇತ್ತು. ಇವತ್ತು ಜನಸಂಖ್ಯೆ ಒಂದು ಕೋಟಿ 50 ಲಕ್ಷವಿದೆ. ನಗರದಲ್ಲಿ ಸುಮಾರು ಒಂದು ಕೋಟಿ ವಾಹನಗಳಿವೆ. ಬೆಂಗಳೂರಿನಲ್ಲಿ ಬೆಸ್ಕಾಂ, ಬೆಂಗಳೂರು ಜಲಮಂಡಳಿ, ಬಿಡಿಎ ಸಹಿತ ವಿವಿಧ ಸರ್ಕಾರಿ ಸಂಸ್ಥೆಗಳು ಸಮನ್ವಯತೆ ಇಲ್ಲದೆ ಕಾರ್ಯನಿರ್ವಹಿಸುತ್ತಿದ್ದು, ಭ್ರಷ್ಟಚಾರ ಹೆಚ್ಚಲು ಕಾರಣವಾಗಿದೆ. ಈ ಹಿನ್ನೆಲೆಯಲ್ಲಿ ಎಲ್ಲಾ ಹಂತದಲ್ಲಿ ಸಮನ್ವಯತೆಯೊಂದಿಗೆ ಅಭಿವೃದ್ಧಿ ಸಾಧಿಸುವುದು ಇಂದಿನ ಅಗತ್ಯವಿದೆ. ನಗರದಲ್ಲಿ ಅಧಿಕಾರ ವಿಕೇಂದ್ರೀಕರಣ ಅಗಬೇಕು, ಆಡಳಿತದಲ್ಲಿ ಪಾರದರ್ಶಕತೆ ಮಾಡಬೇಕು ಎಂದು ರಿಜ್ವಾನ್ ಅರ್ಷದ್ ಸ್ಪಷ್ಟಪಡಿಸಿದರು.

*****************

ರೈತರು ಮತ್ತು ಗ್ರಾಹಕರ ಹಿತದೃಷ್ಟಿಯಿಂದ ಮುಖ್ಯಮಂತ್ರಿ ಅವರೊಂದಿಗೆ ಸಮಾಲೋಚಿಸಿ ಆದಷ್ಟು ಶೀಘ್ರವೇ ಹಾಲಿನ ದರ ಹೆಚ್ಚಳದ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಪಶು ಸಂಗೋಪನಾ ಸಚಿವ ವೆಂಕಟೇಶ್ ವಿಧಾನಪರಿಷತ್‌ನಲ್ಲಿ ಇಂದು ತಿಳಿಸಿದ್ದಾರೆ.

ಸದಸ್ಯರಾದ ಉಮಾಶ್ರೀ ಮತ್ತು ಎಂ.ಜಿ. ಮೂಳೆ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಹಾಲಿನ ದರ ಹೆಚ್ಚಳ ಮಾಡಬೇಕೆಂಬ ಬೇಡಿಕೆ ರೈತರಿಂದ ಕೇಳಿ ಬಂದಿದೆ ಎಂದರು.

ಪ್ರತಿ ಲೀಟರ್ ಗೆ 10 ರೂಪಾಯಿ ಹೆಚ್ಚಳ ಮಾಡಬೇಕೆಂದು ರೈತರು ಪ್ರಸ್ತಾವನೆ ಸಲ್ಲಿಸಿದ್ದಾರೆ. ಇದಕ್ಕೆ ಹಾಲು ಉತ್ಪಾದನಾ ಸಂಘಗಳು ಸಮ್ಮತಿಸಿವೆ. ಅಂತಿಮವಾಗಿ ರೈತರು ಮತ್ತು ಗ್ರಾಹಕರ ಹಿತ ಗಮನದಲ್ಲಿಟ್ಟುಕೊಂಡು ಕ್ರಮ ತೆಗೆದುಕೊಳ್ಳುವುದಾಗಿ ಸ್ಪಷ್ಟಪಡಿಸಿದ್ದಾರೆ.

ಈಗಾಗಲೇ ರಾಜ್ಯದಲ್ಲಿ ಹಾಲು ಉತ್ಪಾದನೆ ಪ್ರತಿ ದಿನಕ್ಕೆ ಒಂದು ಕೋಟಿ ಲೀಟರ್‌ಗೆ ಹೆಚ್ಚಳವಾಗಿದೆ. ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಯಾರಿಗೂ ಹೊರೆಯಾಗದಂತೆ ದರ ಪರಿಷ್ಕರಣೆ ಮಾಡಲಾಗುವುದು ಎಂದು ಹೇಳಿದ್ದಾರೆ.

*****************

ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಗೆ ಒಳಪಡುವ ದೇವಸ್ಥಾನದ ಸರ್ವೇ ಕಾರ್ಯ ಒಂದು ವರ್ಷದ ಅವಧಿಯೊಳಗೆ ಮುಗಿಯಲಿದ್ದು, ಸುಮಾರು 20 ಸಾವಿರ ಎಕರೆ ಜಮೀನು ಇದರ ವ್ಯಾಪ್ತಿಗೆ ಬರಲಿದೆ ಎಂದು ಧಾರ್ಮಿಕ ದತ್ತಿ ಸಚಿವ ರಾಮಲಿಂಗಾರೆಡ್ಡಿ ಮೇಲ್ಮನೆಯಲ್ಲಿ ತಿಳಿಸಿದ್ದಾರೆ.

ಸದಸ್ಯ ಅಬ್ದುಲ್ ಜಬ್ಬಾರ್ ಪ್ರಶ್ನೆಗೆ ಉತ್ತರಿಸಿದ ಅವರು ರಾಜ್ಯದಲ್ಲಿ ಒಟ್ಟು 34 ಸಾವಿರ ದೇವಸ್ಥಾನಗಳು ಮುಜರಾಯಿ ಇಲಾಖೆ ವ್ಯಾಪ್ತಿಗೆ ಒಳಪಡಲಿವೆ. ಈಗಾಗಲೇ 15 ಸಾವಿರ ಎಕರೆ ಜಮೀನನ್ನು ಇಲಾಖೆ ಸುಪರ್ದಿಗೆ ತೆಗೆದುಕೊಳ್ಳಲಾಗಿದೆ. ಇಲಾಖೆಯ ಪ್ರಧಾನ ಕಾರ್ಯದರ್ಶಿ ಜಿಲ್ಲಾಧಿಕಾರಿಗಳು ಚರ್ಚಿಸಿ ಒಂದು ವರ್ಷದ ಅವಧಿಯಲ್ಲಿ ಸರ್ವೇ ಕಾರ್ಯ ಮುಗಿಸಲು ಸೂಚನೆ ನೀಡಿದ್ದಾರೆ ಎಂದು ಮಾಹಿತಿ ನೀಡಿದರು.

*****************

ಪರಿಶಿಷ್ಟ ಸಮುದಾಯಗಳ ಕಲ್ಯಾಣಕ್ಕಾಗಿ ರೂಪಿಸಲಾಗಿರುವ ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಗಳ ಅನುದಾನವನ್ನು ರಾಜ್ಯ ಸರ್ಕಾರದ ಖಾತರಿ ಯೋಜನೆಗಳಿಗೆ ದುರ್ಬಳಕೆ ಮಾಡಿಕೊಳ್ಳುತ್ತಿರುವುದನ್ನು ವಿರೋಧಿಸಿ, ಬಿಜೆಪಿ ಬೆಂಗಳೂರಿನಲ್ಲಿಂದು ಪ್ರತಿಭಟನೆ ನಡೆಸಲಿದೆ.

ಫ್ರೀಡಂ ಪಾರ್ಕ್‌ನಲ್ಲಿ ನಡೆಯಲಿರುವ ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಮಂಡಲದ ಉಭಯ ಸದನಗಳ ಪ್ರತಿಪಕ್ಷ ನಾಯಕರಾದ ಆರ್.ಅಶೋಕ, ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಬೆಂಗಳೂರಿನ ಸಂಸದರು, ಶಾಸಕರು, ಮುಖಂಡರು ಪಾಲ್ಗೊಳ್ಳಲಿದ್ದಾರೆ.

*****************

ಸರ್ಕಾರಿ ಕಾಮಗಾರಿಗಳ ಗುತ್ತಿಗೆ ನೀಡುವಲ್ಲಿ ಅಲ್ಪಸಂಖ್ಯಾತರಿಗೆ ಶೇಕಡ 4ರಷ್ಟು ಮೀಸಲಾತಿ ಕಲ್ಪಿಸಲು ಸರ್ಕಾರ ಮುಂದಾಗಿರುವುದಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಸರ್ಕಾರ ಅಲ್ಪಸಂಖ್ಯಾತರನ್ನು ಓಲೈಸಿಕೊಳ್ಳುವ ರಾಜಕಾರಣ ಮಾಡುತ್ತಿದೆ. ಪರಿಶಿಷ್ಟ ಸಮುದಾಯಗಳಿಗೆ ಸರ್ಕಾರಿ ಕಾಮಗಾರಿಗಳ ಗುತ್ತಿಗೆಯಲ್ಲಿ ಮೀಸಲಾತಿ ಕಲ್ಪಿಸಲಾಗಿದೆಯಾದರೂ, ಇದುವರೆಗೂ ಯಾವುದೇ ಕಾಮಗಾರಿಗಳ ಗುತ್ತಿಗೆ ನೀಡಿಲ್ಲ. ಅನುದಾನವನ್ನೂ ಬಿಡುಗಡೆ ಮಾಡಿಲ್ಲ ಈ ಎಲ್ಲ ವಿಚಾರಗಳನ್ನು ವಿಧಾನಸಭೆಯಲ್ಲಿ ಪ್ರಸ್ತಾಪಿಸಿ, ಸರ್ಕಾರದ ಧೋರಣೆಯನ್ನು ಕೈಬಿಡಬೇಕು ಎಂದು ಒತ್ತಾಯಿಸಲಾಗುವುದು ಎಂದರು.

*****************

ರಾಜ್ಯದ ಹಿರಿಯ ಐಪಿಎಸ್ ಅಧಿಕಾರಿಯೊಬ್ಬರ ಪುತ್ರಿ, ಚಲನಚಿತ್ರ ನಟಿ, ರನ್ಯಾ ರಾವ್ ದುಬೈನಿಂದ ಅಕ್ರಮ ಚಿನ್ನ ಸಾಗಣೆ ವೇಳೆ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಡಿಐಆರ್ ಅಧಿಕಾರಿಗಳಿಗೆ ಸಿಕ್ಕಿ ಬಿದ್ದಿದ್ದಾರೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಈ ಕುರಿತು ಮಾಧ್ಯಮ ಹೇಳಿಕೆ ನೀಡಿರುವ ಅಧಿಕಾರಿಗಳು ಇದು ಅತಿ ದೊಡ್ಡ ಅಕ್ರಮ ಕಳ್ಳ ಸಾಗಣೆ ಎಂದು ತಿಳಿಸಿದ್ದಾರೆ. ಒಟ್ಟು 17 ಕೋಟಿ 29 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ನಗದು ವಶಪಡಿಸಿಕೊಳ್ಳಲಾಗಿದೆ.

*****************

ವೃತ್ತಿ ರಂಗಭೂಮಿ ರಂಗಾಯಣದ ವತಿಯಿಂದ ಇದೇ 15 ರಿಂದ ಮೂರು ದಿನಗಳ ಕಾಲ ದಾವಣಗೆರೆಯಲ್ಲಿ ರಾಷ್ಟ್ರೀಯ ವೃತ್ತಿ ರಂಗೋತ್ಸವ ಏರ್ಪಡಿಸಲಾಗಿದೆ ಎಂದು ರಂಗಾಯಣ ನಿರ್ದೇಶಕ ಮಲ್ಲಿಕಾರ್ಜುನ ಕಡಕೋಳ ತಿಳಿಸಿದ್ದಾರೆ.

ದಾವಣಗೆರೆ ದೃಶ್ಯಕಲಾ ಮಹಾವಿದ್ಯಾಲಯದಲ್ಲಿಂದು ರಂಗೋತ್ಸವ ಲಾಂಛನ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಕನ್ನಡ, ತಮಿಳು ಮತ್ತು ತೆಲುಗು ಭಾಷೆಯ ನಾಟಕಗಳು ಪ್ರದರ್ಶನಗೊಳ್ಳಲಿವೆ ಮಾಹಿತಿ ನೀಡಿದ್ದಾರೆ.

ಧ್ವನಿ: ಮಲ್ಲಿಕಾರ್ಜುನ ಕಡಕೋಳ

*****************

ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕಿನ ಮೇಲುಕೋಟೆಯ ವಿಶ್ವವಿಖ್ಯಾತ ಚಲುವನಾರಾಯಣಸ್ವಾಮಿಯ ವೈರಮುಡಿ ಉತ್ಸವ ಏಪ್ರಿಲ್ 7 ರಂದು ನಡೆಯಲಿದ್ದು, ಅಧಿಕಾರಿಗಳು ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಸೂಚಿಸಿದ್ದಾರೆ.

ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವೈರಮುಡಿ ಉತ್ಸವದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತಾಡಿದ ಅವರು, ಏಪ್ರಿಲ್ 2 ರಿಂದ 14 ರವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಉತ್ಸವಗಳು ನಡೆಯಲಿದೆ. ಯಾವುದೇ ಲೋಪವಿಲ್ಲದೇ ಕಾರ್ಯಕ್ರಮಗಳನ್ನು ನಡೆಸಲು ಸಮಿತಿ ರಚಿಸಿ ವಿವಿಧ ಅಧಿಕಾರಿಗಳಿಗೆ ಜವಾಬ್ದಾರಿಯನ್ನು ವಹಿಸಿದ್ದಾರೆ.

********ಮುಕ್ತಾಯ********